**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 96/2020**

**ಚಾ.ಸಾಃ 6, ಫ್ರಾ.ಸಾಃ 3**

| | |
|---|---|
| ಸಾಕ್ಷಿದಾರನ ಹೆಸರು | ವೆಂಕಟೇಶ ನಾಯ್ಕ |
| ತಂದೆಯ ಹೆಸರು | ಸುರೇಶ ನಾಯ್ಕ |
| ವಯಸ್ಸು | 33 ವರ್ಷಗಳು |
| ಉದ್ಯೋಗ | ಕೂಲಿ |
| ವಾಸ್ತವ್ಯ | ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 17-03-2023 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಸಾಕ್ಷಿಗೆ ಈ ಪ್ರಕರಣದ ಗುನ್ನೆ ಜಾಗೆ ಪಂಚನಾಮೆ ಮತ್ತು ಕಚ್ಚಾ ನಕಾಶೆ ಮತ್ತು ವಾಹನ ಜಪ್ತು ಪಂಚನಾಮೆಯನ್ನು ತೋರಿಸಲಾಗಿ ಅವುಗಳ ಮೇಲಿನ ಸಹಿಗಳನ್ನು ತನ್ನದು ಎಂದು ತಿಳಿಸಿದ್ದರಿಂದ ಪಂಚನಾಮೆಯನ್ನು ನಿಪಿ-1, ಕಚ್ಚಾ ನಕಾಶೆಯನ್ನು ನಿಪಿ-2, ವಾಹನ ಜಪ್ತು ಪಂಚನಾಮೆಯನ್ನು ನಿಪಿ-3 ಮತ್ತು ಅವುಗಳ ಮೇಲಿನ ಸಾಕ್ಷಿ ಸಹಿಗಳನ್ನು ನಿಪಿ-1(ಎ) ರಿಂದ ನಿಪಿ-3(ಎ) ಎಂದು ಗುರುತಿಸಲಾಯಿತು.

ಸದರಿ ಸಹಿಗಳನ್ನು ಸುಮಾರು 3-4 ವರ್ಷಗಳ ಹಿಂದೆ ನಾನು ಠಾಣೆಗೆ ಬಂದಿದ್ದಾಗ ಪೋಲೀಸರು ಪಡೆದಿರುತ್ತಾರೆ. ನಿಪಿ-1 ರಿಂದ 3 ರಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಕಚ್ಚಾ ನಕಾಶೆ ತಯಾರಿಸಿಲ್ಲ.

ಸಾಕ್ಷಿಗೆ 3 ಛಾಯಾಚಿತ್ರಗಳನ್ನು ತೋರಿಸಲಾಗಿ ಅವುಗಳಲ್ಲಿ ತನ್ನ ಇರುವಿಕೆಯನ್ನು ಒಪ್ಪಿಕೊಂಡಿದ್ದರಿಂದ ಸದರಿ ಛಾಯಾಚಿತ್ರಗಳನ್ನು ಕ್ರಮವಾಗಿ ನಿಪಿ-4 ರಿಂದ 6 ಎಂದು ಗುರುತಿಸಲಾಯಿತು. ಸದರಿ ಛಾಯಾಚಿತ್ರಗಳನ್ನು ಪೋಲಿಸರು ಯಾವ ಕಾರಣಕ್ಕಾಗಿ ತೆಗೆಸಿದ್ದಾರೆ ಎನ್ನುವುದು ನನಗೆ ಗೊತ್ತಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 25-02-2022 ರಂದು ನನ್ನನ್ನು ಮತ್ತು ಚಾಸಾ-4 ನ್ನು ಚಾಸಾ-21 ರವರು ಅನಂತವಾಡಿಯ ಮಾವಿನಸಾಗ ಕಚ್ಚಾ ರಸ್ತೆಯ ಕ್ರಾಸಿನ ಬಳಿ ಕರೆಸಿದ್ದರು ಎಂದರೆ ಸರಿ. ಚಾಸಾ-1 ಮಹಾಬಲೇಶ್ವರ ನಾಯ್ಕರವರು ಅಪಘಾತ ಸ್ಥಳವನ್ನು ತೋರಿಸಿದರು ಎಂದರೆ ಸರಿ. ಪೋಲಿಸರು ಸ್ಥಳದಲ್ಲಿ

ಪಂಚನಾಮೆ ಮಾಡಿ, ಕಚ್ಚಾ ನಕಾಶೆ ಮಾಡಿ ಫೋಟೋ ತೆಗೆದರು ಎಂದರೆ ಸರಿ. ನಂತರ ನನ್ನನ್ನು ಮಂಕಿ ಠಾಣೆಗೆ ಕರೆದುಕೊಂಡು ಹೋದರು ಎಂದರೆ ಸರಿ. ಚಾಸಾ-6 ರವರು ಅಪಘಾತಕ್ಕೆ ಒಳಗಾಗಿದ್ದ ವಾಹನವನ್ನು ಹಾಜರು ಮಾಡಿದರು ಎಂದರೆ ಸರಿ. ಚಾಸಾ-1 ರವರು ಸದರಿ ಬೈಕನ್ನು ಗುರುತಿಸಿದ್ದಾರೆ ಎಂದರೆ ಸರಿ. ಪೋಲಿಸರು ಪಂಚನಾಮೆ ಮಾಡಿ, ಛಾಯಾಚಿತ್ರ ತೆಗೆದು ಬೈಕನ್ನು ಜಪ್ತು ಮಾಡಿಕೊಂಡು ನನ್ನ ಸಹಿ ಪಡೆದರು ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೃಷ್ಣ ವಿ. ನಾಯ್ಕರಿಂದಃ**

ನಿಪಿ-1 ಸ್ಥಳ ಪಂಚನಾಮೆ, ನಿಪಿ-2 ಕಚ್ಚಾ ನಕಾಶೆ ಮತ್ತು ನಿಪಿ-6 ಮೋಟಾರು ಸೈಕಲ್ ಜಪ್ತು ಪಂಚನಾಮೆಯಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ ಎಂದರೆ ಸರಿ. ನಾನು ಮತ್ತು ಸ್ಥಳದಲ್ಲಿ ಇದ್ದ ಬೇರೆಯವರು ಪಂಚನಾಮೆಯನ್ನು ಇದೇ ರೀತಿ ಬರೆಯಬೇಕು ಎಂದು ಹೇಳಿರುವುದಿಲ್ಲ ಎಂದರೆ ಸರಿ. ಪಂಚನಾಮೆಗಳನ್ನು ಪೋಲಿಸರು ನನಗೆ ಓದಿ ಹೇಳಿಲ್ಲ ಎಂದರೆ ಸರಿ. ಪೋಲಿಸರು ಹೇಳಿದ್ದರಿಂದ ಸಹಿ ಹಾಕಿದ್ದೇನೆ ಎಂದರೆ ಸರಿ. ನಾನು ಅಪಘಾತ ಸ್ಥಳದಲ್ಲಿ ಸಹಿ ಮಾಡಿದ್ದನ್ನು ಬಿಟ್ಟು ಬೇರೆ ಕಡೆ ಸಹಿ ಮಾಡಿಲ್ಲ ಎಂದರೆ ಸರಿ. ನಾನು ಸ್ಥಳಕ್ಕೆ ಹೋಗುವ ಅರ್ಧಗಂಟೆ ಮೊದಲು ಪೋಲಿಸರು ಅಲ್ಲಿಗೆ ಬಂದಿದ್ದರು. ಅಪಘಾತ ಸ್ಥಳವನ್ನು ಯಾರೂ ತೋರಿಸಲಿಲ್ಲ ಎಂದರೆ ಸರಿ. ಪೋಲಿಸರು ಸ್ಥಳದಲ್ಲಿ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಅಪಘಾತ ಸ್ಥಳದಲ್ಲಿ ಪಂಚನಾಮೆಗೆ ಸಹಿ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಠಾಣೆಯಲ್ಲಿ ಸಹಿ ಮಾಡಿಲ್ಲ ಎಂದರೆ ಸರಿಯಲ್ಲ. ಪೋಲಿಸರ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**